# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:-** ಆರ್.ಡಿ.ಪಿ.ಆರ್. ಇಲಾಖೆಯಲ್ಲಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಆಗಿ ಈಗಾಗಲೇ ಮೇಲ್ದರ್ಜೆಗೇರಿಸಿ ಆದೇಶ ಹೊರಡಿಸಲಾಗಿದ್ದರೂ ಅನುಷ್ಠಾನ ಮಾಡದಿರುವ ಕುರಿತು ಹಾಗೂ ಎಲ್ಲಾ 6010 ಗ್ರಾಮ ಪಂಚಾಯತ್‌ಗಳಿಗೂ ಗ್ರೂಪ್-ಬಿ ಹುದ್ದೆ ಮಂಜೂರು ಮಾಡುವ ಕುರಿತು.

****

**ಉತ್ತರ:** ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಮಂಜೂರಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಗ್ರೂಪ್ `ಬಿ` ವೃಂದಕ್ಕೆ ಉನ್ನತೀಕರಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ಪ್ರಮುಖ ಬೇಡಿಕೆಯಾಗಿತ್ತು. ಈ ಬಗ್ಗೆ ಆರ್ಥಿಕ ಇಲಾಖೆಗೆ ಸಹಮತಿಗಾಗಿ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯ ಸಹಮತಿಯ ಮೇರೆಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ ಬಿ ಹುದ್ದೆಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು 6ನೇ ಕರ್ನಾಟಕ ರಾಜ್ಯ ವೇತನ ಆಯೋಗದ ಮುಂದೆ ಮಂಡಿಸಲಾಗಿತ್ತು. 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ 2ನೇ ಸಂಪುಟದಲ್ಲಿ ಆರ್ಥಿಕ ಇಲಾಖೆಗೆ ಸಲ್ಲಿಸಿದ್ದು, ಅದರಲ್ಲಿ `ಗ್ರಾಮ ಪಂಚಾಯತಿಗಳ ಮೇಲ್ದರ್ಜೆಗೇರಿಸುವಿಕೆ ವಿಷಯವು ಸರ್ಕಾರದ ಹಂತದಲ್ಲಿ ಅದರ ಕಾರ್ಯನಿರ್ವಹಣೆಯ ಅಗತ್ಯತೆಗಳನ್ನು ಮತ್ತು ಇತರೆ ತತ್ಸಬಂಧ ಅಂಶಗಳನ್ನು ತೀರ್ಮಾನಿಸಬೇಕಾಗುತ್ತದೆ` ಎಂದು ತಿಳಿಸಿರುತ್ತದೆ.

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ 6021 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ ಗ್ರೇಡ್-1 ಗ್ರಾಮ ಪಂಚಾಯತಿಗಳ 2194 ಹುದ್ದೆಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರೇಡ್ -1 ಹುದ್ದೆ ಎಂದು ರೂ. 40,900–78,200 ವೇತನ ಶ್ರೇಣಿಯನ್ನು (ರೂ.21,600 – 40,050 pre-revised, as suggested by the Sixth Pay Commission) ನೀಡಿ ಗ್ರೇಡ್-1 ಹುದ್ದೆಗೆ ಮೇಲ್ದರ್ಜೆಗೇರಿಸಲು ಆರ್ಥಿಕ ಇಲಾಖೆ ಸಹಮತಿ ಕೋರಲಾಗಿತ್ತು. ಆರ್ಥಿಕ ಇಲಾಖೆಯು 6021 ಹುದ್ದೆಗಳ ಪೈಕಿ ವೇತನ ಶ್ರೇಣಿ ರೂ. 40,900–78,200 ರಲ್ಲಿ 1500 ಹುದ್ದೆಗಳನ್ನು ಅಂದರೆ ಈಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದ ಬಲದ 1/4 ರಷ್ಟನ್ನು ಹುದ್ದೆಗಳನ್ನು ಉನ್ನತೀಕರಿಸಲು ಸಹಮತಿ ನೀಡಿದ್ದು, ಅದರಂತೆ ಸರ್ಕಾರದ ಆದೇಶ ಸಂಖ್ಯೆ: RDPR 29 GPS 2021, ದಿನಾಂಕ:09-11-2022 ರಲ್ಲಿ 1500 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಿ ಮರುಪದನಾಮೀಕರಿಸಿ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ (ರಿ) ರವರು ಉನ್ನತೀಕರಿಸಿರುವ 1500 ಹುದ್ದೆಗಳ ಜೊತೆಗೆ ವೇತನ ಆಯೋಗದ ಶಿಫಾರಸ್ಸಿನಂತೆ ಇನ್ನುಳಿದ 694 ಹುದ್ದೆಗಳನ್ನು ಅಂದರೆ ಒಟ್ಟಾರೆ ಗ್ರೇಡ್-1 ಗ್ರಾಮ ಪಂಚಾಯಿತಿಯ 2194 ಹುದ್ದೆಗಳನ್ನು ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಲು ಕೋರಿರುತ್ತಾರೆ.

ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಕಾರ್ಯಕಾರಿ ಆದೇಶದ ಮೂಲಕ ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಲಾಗಿದೆ. ಸದರಿ ವೃಂದಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗುತ್ತಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳು, ರಚನೆಯಾದ ನಂತರ 1500 ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ:RDPR 330 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.